## ವೃಕ್ಷಾರೋಪಣ ಕಾರ್ಯಕ್ರಮದಲ್ಲಿ ಸ್ವರ್ಣವಲ್ಲಿ ಸ್ವಾಮೀಜಿ

# ಬೆಟ್ಟ ಅಭಿವೃದ್ಧಿಗೆ ಯೋಜನೆ ರೂಪಿಸಿ

ಪ್ರಜಾವಾಣಿ ವಾರ್ತೆ

ಶಿರಸಿ: 'ಬೆಟ್ಟದ ಅಭಿವೃದ್ಧಿಗೆ ರೈತರು ಇನ್ನಷ್ಟು ಕಾಳಜಿ ವಹಿಸಲು ಅರಣ್ಯ ಇಲಾಖೆ ಯೋಜನೆ ರೂಪಿಸಬೇಕು' ಎಂದು ಸ್ವರ್ಣವಲ್ಲಿಯ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಸ್ವರ್ಣವಲ್ಲಿ ಸಸ್ಯಲೋಕದಲ್ಲಿ ವೃಕ್ಷಾರೋಪಣ ಕಾರ್ಯಕ್ರಮಕ್ಕೆ ಮಂಗಳವಾರ ಚಾಲನೆ ನೀಡಿ ಅವರು ಮಾತನಾಡಿದರು.

'ಕೇಂದ್ರದ ಅರಣ್ಯ ಸಂರಕ್ಷಣೆ (ತಿದ್ದುಪಡಿ) ಮಸೂದೆ ಬಗ್ಗೆ ಚರ್ಚೆ ಆಗಬೇಕು. ಅರಣ್ಯ ಪ್ರದೇಶಗಳ ರಕ್ಷಣೆಗೆ ಕಾಯ್ದೆ ಬಲವಾಗಿರಬೇಕು. ಅಭಿವೃದ್ಧಿ ಸುಸ್ಥಿರವಾಗಿರಬೇಕು' ಎಂದರು.

'ಸಸ್ಯಲೋಕ ಈಗ ಸಮೃದ್ಧವಾಗಿದೆ. ಇಲ್ಲಿ ವಿವಿಧ ವೃಕ್ಷಗಳಿವೆ. ಹಣ್ಣಿನ, ಔಷಧೀಯ ಸಸ್ಯಗಳು ಇವೆ' ಎಂದು ಹೇಳಿದರು.

ಜೀವ ವೈವಿಧ್ಯ ಮಂಡಳಿಯ ಮಾಜಿ ಅಧ್ಯಕ್ಷ ಅನಂತ ಹೆಗಡೆ ಅಶೀಸರ, ಸಸ್ಯಲೋಕ ಬೆಳೆದು ಬಂದ ದಾರಿಯ ಬಗ್ಗೆ ಮಾತನಾಡಿದರು.

ಶಿರಸಿ ಡಿಎಫ್‌ಒ ಜಿ.ಆರ್.ಅಜ್ಜಯ್ಯ ಮಾತನಾಡಿ, ಬೆಟ್ಟ ಅಭಿವೃದ್ಧಿಗೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗುವುದು ಎಂದು ಹೇಳಿದರು.

ಹುಲೇಕಲ್ ವಲಯ ಅರಣ್ಯ ಕಚೇರಿಯಿಂದ ಜೀಜದುಂಡೆ ತಯಾರಿಕೆ ಕಾರ್ಯಕ್ರಮ ನಡೆಯಿತು. ರಾಜರಾಜೇಶ್ವರಿ ಸಂಸ್ಕೃತ ಮಹಾವಿದ್ಯಾಲಯದ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಸಸ್ಯಲೋಕದಲ್ಲಿ ಗಿಡ ನೆಟ್ಟರು.

ವಿಧಾನ ಪರಿಷತ್ ಸದಸ್ಯ ಶಾಂತಾರಾಮ ಸಿದ್ದಿ, ಸೋಂದಾ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಮತಾ ಜೈನ್, ಎಸಿಎಫ್ ರಘು ಡಿ., ಆರ್.ಎಫ್.ಒ., ಉಷಾ ಕಬ್ಬೇರ್, ಜಾಗೃತಿ ವೇದಿಕೆಯ ಅಧ್ಯಕ್ಷ ರತ್ನಾಕರ, ಕೃಷಿ ಪ್ರತಿಷ್ಠಾನದ ಆರ್.ಎನ್.ಹೆಗಡೆ, ಪ್ರಾಧ್ಯಾಪಕ ಮಹಾಬಲೇಶ್ವರ, ಕೃಷಿ ಸಮಿತಿಯ ನೀರ್ನಳ್ಳಿ ಸೀತಾರಾಂ, ಆಡಳಿತ ಮಂಡಳಿ ಕಾರ್ಯದರ್ಶಿ ಜಿ.ವಿ. ಹೆಗಡೆ, ಮಹಾಬಲೇಶ್ವರ ಗುಮ್ಮಾನಿ, ಗಣಪತಿ ಬಿಸಲಕೊಪ್ಪ ಇದ್ದರು.



ಶಿರಸಿ ತಾಲ್ಲೂಕಿನ ಸ್ವರ್ಣವಲ್ಲಿ ಸಸ್ಯಲೋಕದಲ್ಲಿ ರಾಜರಾಜೇಶ್ವರಿ ಸಂಸ್ಕೃತ ಮಹಾವಿದ್ಯಾಲಯದ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಸಸಿ ನೆಟ್ಟರು